**CC 1096/2019**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ**
**ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್ 1096/2019**

**ಸಿ ಡಬ್ಲ್ಯೂ -9**
**ಪಿ ಡಬ್ಲ್ಯೂ -7**

**ಸಾಕ್ಷಿಯ ಹೆಸರು -** **ರಮೇಶ್**
**ತಂದೆಯ ಹೆಸರು -** **ರುದ್ರಪ್ಪ**
**ವಯಸ್ಸು -** 39 **ವರ್ಷಗಳು**
**ಉದ್ಯೋಗ -** **ಆಟೋ ಚಾಲಕ**
**ವಾಸಸ್ಥಳ -** **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ 29-01-2026 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಜಪ್ತು ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ **4(ಬಿ)** ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಈಗ್ಗೆ **7-8** ವರ್ಷಗಳ ಹಿಂದೆ ಹೊಸಪೇಟೆ ಪಟ್ಟಣ ಪೋಲಿಸ್ ಠಾಣೆಯಲ್ಲಿ ಮಾಡಿರುತ್ತೇನೆ. ನಿಪಿಃ **4** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ ಮತ್ತು ಯಾವುದೇ ವ್ಯಕ್ತಿಯ ಬರಹಗಳನ್ನು ಜಪ್ತು ಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**CC 1096/2019**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 18-06-2019 ರಂದು ನನ್ನನ್ನು ಮತ್ತು ಚಾಸಾ - 8 ರವರನ್ನು ಪ್ರಕರಣದ ತನಿಖಾಧಿಕಾರಿ ಠಾಣೆಗೆ ಕರೆಯಿಸಿ ಚಾಸಾ -1 ರವರ ಕೋರಿಕೆ ಬರಹಗಳನ್ನು ನಮ್ಮ ಸಮಕ್ಷಮ ಒಟ್ಟು 6 ಪುಟಗಳಲ್ಲಿ ಬರೆಯಿಸಿ ಅವುಗಳನ್ನು ಆರ್ 7 ರಿಂದ 12 ಎಂದು ಗುರುತಿಸಿ ಸಂಜೆ 4.30 ರಿಂದ 6.30 ರವರೆಗೆ ಅವುಗಳನ್ನು ನಿಪಿಃ 4 ರಂತೆ ಜಪ್ತು ಪಡಿಸಿಕೊಳ್ಳಲಾಗಿತ್ತು ಅಂದರೆ ಸರಿಯಲ್ಲ. ನಿಪಿಃ 4 ಕ್ಕೆ ಆಗ್ಗೆ ಸಹಿ ಮಾಡಿದ್ದೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಚಾಸಾ -1 ರವರ ಬರಹಗಳನ್ನು ಜಪ್ತು ಪಡಿಸಿಕೊಂಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಎಂ ಕೆ ವಕೀಲರಿಂದಃ** ಇಲ್ಲಾ.

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.